## ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

**ಸಿ.ಸಿ. 3657/2025**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.01**

**ದಿನಾಂಕಃ** 05.02.2026 **ಸಿಡಬ್ಲ್ಯೂ.02**

| | |
|---|---|
| ಹೆಸರು | ಸುನೀಲ್ |
| ತಂದೆ ಹೆಸರು | ಚಂದ್ರಪ್ಪ |
| ವಯಸ್ಸು | 23 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಬನ್ನಿಕೋಡು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಆರೋಪಿ ಪರಿಚಯವಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ಗುರುತಿಸಿದ್ದು ಅದು ಸ್ಥಳ ಪಂಚನಾಮೆ ಆಗಿದ್ದು ಅದನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ಗುರುತಿಸಿದ್ದು ಅದು ಮಾಲು ಪಟ್ಟಿ ಆಗಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ಗುರುತಿಸಿದ್ದು ಅದು ಮಾದರಿ ಸೀಲನ ನಕಲು ಆಗಿದ್ದು ಅದನ್ನು ನಿಪಿ.3 ಎಂದು ಸಾಕ್ಷಿಯ ಸಹಿಯನ್ನು ನಿಪಿ.3 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು 1 ವರ್ಷದ ಹಿಂದೆ ಹರಿಹರ ಬೈಪಾಸ್ ಹತ್ತಿರ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಹಾಗೂ ದಾಖಲೆಗಳನ್ನಾಗಲಿ ಜಪ್ತು ಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 28.02.2025 ರಂದು ಆಂಜನೇಯ ದೇವಸ್ಥಾನದ ಹಿಂಬಾಗಲ್ಲಿರುವ ತಳವಾರ ಲಿಂಗೇಶಪ್ಪ ರವರ ಮನೆಯಲ್ಲಿ ನಮ್ಮ ಸಮಕ್ಷಮ ಅಬಕಾರಿ ಅಧಿಕಾರಿಗಳು ಪಂಚನಾಮೆ ಜರುಗಿಸಿ 90 ಎಂ ಎಲ್ ನ

ಓಲ್ಡ ಗ್ರೇನ್ ವಿಸ್ಕಿಯ 15 ಟೆಟ್ರಾ ಪ್ಯಾಕಗಳು, 90 ಮಿಲಿಯ ಪ್ಯೂರ ಗ್ರೇನ್ ವಿಸ್ಕಿಯ 10 ಟೆಟ್ರಾ ಪ್ಯಾಕಗಳು, 90 ಮಿಲಿಯ ಹೈವರ್ಡ್ಸ ಚಿಯರ್ಸ ವಿಸ್ಕಿಯ 10 ಟೆಟ್ರಾ ಪ್ಯಾಕಗಳು ಹಾಗೂ 90 ಮಿಲಿಯ ಒರಿಜಿನಲ್ ಚಾಯ್ಸು ವಿಸ್ಕಿಯ 7 ಟೆಟ್ರಾ ಪ್ಯಾಕಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಕಾಲಕ್ಕೆ ಸಂಜೆ 6.30 ರಿಂದ 7.30 ಗಂಟೆಗೆ ನಮ್ಮ ಸಮಕ್ಷಮ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ